ಕರ್ನಾಟಕ ಲೋಕ ಸೇವಾ ಆಯೋಗ

ಸಂಖ್ಯೆ:ಪಿಎಸ್‌ಸಿ 2474 ಇ(1)/2024-25 ದಿನಾಂಕ: 13-02-2025

## ಅಧಿಸೂಚನೆ

### 2023-24 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಯ ಮುಖ್ಯ ಪರೀಕ್ಷೆಗೆ (Mains Examination) ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ:

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) ನಿಯಮಗಳು, 1997 ಮತ್ತು ಕಾಲಾಕಾಲಕ್ಕೆ ತಿದ್ದುಪಡಿಯಾದ ನಿಯಮಗಳನ್ವಯ ಅಧಿಸೂಚನೆ ಸಂಖ್ಯೆ:ಪಿಎಸ್‌ಸಿ 509 ಇ(1)/2023-24, ದಿನಾಂಕ:26-02-2024ರಂದು ಅಧಿಸೂಚಿಸಲಾದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ - ಎ ಮತ್ತು ಗ್ರೂಪ್ - ಬಿ ವೃಂದದ 384 ಹುದ್ದೆಗಳಿಗೆ ದಿನಾಂಕ:29-12-2024ರಂದು ಪೂರ್ವಭಾವಿ ಮರುಪರೀಕ್ಷೆಯನ್ನು ನಡೆಸಲಾಗಿರುತ್ತದೆ. ಆಯೋಗವು ಸದರಿ ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ 1:15 ಅನುಪಾತದಲ್ಲಿ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ದಿನಾಂಕ:10-02-2025ರಂದು ಪ್ರಕಟಿಸಲಾಗಿರುತ್ತದೆ. ಪ್ರಸ್ತುತ ಮುಖ್ಯ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

1. ಅರ್ಜಿ ಸಲ್ಲಿಸಲು ಕಾಲಮಿತಿ:

| | |
|---|---|
| ಆನ್ ಲೈನ್ ನಲ್ಲಿ ಅರ್ಜಿ ಭರ್ತಿ ಮಾಡುವ ಪ್ರಾರಂಭದ ದಿನಾಂಕ | 17-02-2025 |
| ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 03-03-2025 |
| • ಮುಖ್ಯ ಪರೀಕ್ಷೆಯನ್ನು ದಿನಾಂಕ: 28-03-2025, 29-03-2025, 01-04-2025 & 02-04-2025ರಂದು ನಡೆಸಲು ಉದ್ದೇಶಿಸಲಾಗಿದೆ. | |

2. **ಸಹಾಯವಾಣಿ ಸಂಖ್ಯೆ:** ಅರ್ಜಿ ಸಲ್ಲಿಸುವುದಕ್ಕೆ ಸಂಬಂಧಿಸಿದಂತೆ ತೊಂದರೆಗಳು ಎದುರಾದಲ್ಲಿ ಅಭ್ಯರ್ಥಿಗಳು ಈ ಕೆಳಕಂಡ HELP LINE ನಂಬರ್ ಅನ್ನು ಸಂಪರ್ಕಿಸಲು ಸೂಚಿಸಿದೆ.
   HELP LINE NO:080-30574957 / 30574901

3. **ಪರೀಕ್ಷಾ ಶುಲ್ಕ:-**
   (ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿ ಸೈನಿಕ & ಅಂಗವಿಕಲ ಅಭ್ಯರ್ಥಿಗಳಿಗೆ ರೂ. 300/-
   (ಆ) ಇತರೆ ಅಭ್ಯರ್ಥಿಗಳಿಗೆ ರೂ. 500/-

4. **ಪರೀಕ್ಷಾ ಕೇಂದ್ರ:** ಮುಖ್ಯ ಪರೀಕ್ಷೆಯನ್ನು ಬೆಂಗಳೂರು ಮತ್ತು ಧಾರವಾಡ ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುತ್ತದೆ.

5. **ಅರ್ಜಿ ಸಲ್ಲಿಸಲು ಸೂಚನೆಗಳು:** ಅಭ್ಯರ್ಥಿಗಳು ಆನ್ ಲೈನ್ ಮೂಲಕ (ONLINE) ಮುಖ್ಯ ಪರೀಕ್ಷೆಯ ಅರ್ಜಿ ಭರ್ತಿ ಮಾಡುವ ಮುನ್ನ ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಓದಿ ಪಾಲಿಸತಕ್ಕದ್ದು:

5.1 ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.

5.2 ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.

5.3 **ವಿಶೇಷ ಸೂಚನೆ:** ಈಗಾಗಲೇ ಸದರಿ ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆ ಅರ್ಜಿಯೊಂದಿಗೆ ಆನ್‌ಲೈನ್ ನಲ್ಲಿ ಸಲ್ಲಿಸಿರುವ ದಾಖಲೆಗಳನ್ನು ಹಾಗೂ ಪ್ರಸ್ತುತ ಮುಖ್ಯ ಪರೀಕ್ಷೆಯ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತು/ದಾಖಲೆಗಳನ್ನು ಅವಶ್ಯಕ ಸಂದರ್ಭಗಳಲ್ಲಿ ಆಯೋಗವು ಪರಿಶೀಲನೆಗೆ ಒಳಪಡಿಸಬಹುದಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

5.4 ಅಭ್ಯರ್ಥಿಗಳು ಈಗಾಗಲೇ ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ನಮೂದಿಸಿರುವ ವಿವರಗಳನ್ವಯ ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ಪೂರ್ವಭಾವಿ ಪರೀಕ್ಷೆಯ ನೊಂದಣಿ ಸಂಖ್ಯೆ, ಅಭ್ಯರ್ಥಿಯ ಹೆಸರು, ಸಹಿ, ಭಾವಚಿತ್ರ, ತಂದೆ/ತಾಯಿ ಹೆಸರು, ಪತಿ/ಪತ್ನಿಯ ಹೆಸರು, ಅಭ್ಯರ್ಥಿಯ ಲಿಂಗ ಮತ್ತು ಜನ್ಮ ದಿನಾಂಕ, ಮೀಸಲಾತಿ ಹಾಗೂ ವಿಳಾಸದ ವಿವರಗಳು ಸ್ವಯಂ ದಾಖಲಾಗುತ್ತವೆ. ಈ ಹಿಂದೆ ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ನಮೂದಿಸಲಾದ ಯಾವುದೇ ಮಾಹಿತಿಗಳನ್ನು ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗುವುದಿಲ್ಲ.

5.5 ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಯ ಅರ್ಜಿಯಲ್ಲಿ ವಿದ್ಯಾರ್ಹತೆ ಅಂಕಣದಲ್ಲಿ Pursuing ಎಂದು ಆಯ್ಕೆ ಮಾಡಿಕೊಂಡಿದ್ದಲ್ಲಿ ಮಾತ್ರ ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯ ಪರೀಕ್ಷೆಯನ್ನು ಪೂರ್ಣಗೊಳಿಸಿರುವ ಬಗ್ಗೆ ರಿಜಿಸ್ಟ್ರಾರ್ ರವರಿಂದ ದೃಢೀಕರಿಸಿದ ಘಟಿಕೋತ್ಸವ ಪ್ರಮಾಣ ಪತ್ರ/ತಾತ್ಕಾಲಿಕ ಪದವಿ ಪ್ರಮಾಣ ಪತ್ರ/ಅಂಕಪಟ್ಟಿ /ರಿಸಲ್ಟ್ ಶೀಟ್ ಪ್ರತಿಯನ್ನು **ಅಪ್‌ಲೋಡ್ ಮಾಡತಕ್ಕದ್ದು, (ದಾಖಲೆಗಳು ಸ್ಪಷ್ಟವಾಗಿರಬೇಕು). ಸದರಿ ದಾಖಲೆಗಳು ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರತಕ್ಕದ್ದು. ತಪ್ಪಿದ್ದಲ್ಲಿ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.**

5.6 ಅಂಗವಿಕಲ ಅಭ್ಯರ್ಥಿಗಳು ಸ್ವಂತ ಲಿಪಿಕಾರರ ಸಹಾಯವನ್ನು ಕೋರಿದಲ್ಲಿ ಲಿಪಿಕಾರರ ವಿವರಗಳನ್ನು ಅರ್ಜಿಯಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. ಲಿಪಿಕಾರರ ಭಾವಚಿತ್ರ ಮತ್ತು ಸಹಿಯನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

5.7 ಹೈದರಾಬಾದ್- ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 03 ಹೈಕಕೋ 2019, ದಿನಾಂಕ:15-06-2022ರಲ್ಲಿ ನಿರ್ದಿಷ್ಟಪಡಿಸಿರುವ ಆಯ್ಕೆಗಳನ್ವಯ ಮುಖ್ಯ ಪರೀಕ್ಷೆಯ ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ಆಯ್ಕೆಗಳನ್ನು ನಮೂದಿಸತಕ್ಕದ್ದು.

5.8 ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಾವಳಿಗಳು, 1997 ಹಾಗೂ ತಿದ್ದುಪಡಿ ನಿಯಮಗಳ ಉಪನಿಯಮ 4. (3)ರಲ್ಲಿ "The candidates who apply for the Competitive Examinations shall clearly indicate in their application forms the services or posts for which they wish to be considered for appointment in the order of preference. They shall not be considered for such of the service or posts which are not preferred by them." ಎಂದು ನಮೂದಾಗಿದ್ದು, ಅದರಂತೆ ಅಭ್ಯರ್ಥಿಗಳು ಆನ್‌ಲೈನ್

ಅರ್ಜಿಯಲ್ಲಿ ಅಧಿಸೂಚಿಸಿರುವ ಹುದ್ದೆಗಳ ಆದ್ಯತಾನುಕ್ರಮವನ್ನು(Preference) ಭರ್ತಿ ಮಾಡತಕ್ಕದ್ದು. ಆದ್ಯತೆ ನೀಡದಿರುವ ಹುದ್ದೆಗಳ ಆಯ್ಕೆಗೆ ಅವರನ್ನು ಪರಿಗಣಿಸಲಾಗುವುದಿಲ್ಲ. ಹುದ್ದೆಗಳ ವಿವರಗಳನ್ನು ಅನುಬಂಧ-ಎ ರಲ್ಲಿ ನೀಡಲಾಗಿದೆ.

5.9 ವಿಶೇಷ ಸೂಚನೆ:- ಅಂಗವಿಕಲ ಅಭ್ಯರ್ಥಿಗಳು ಹುದ್ದೆಗಳಿಗೆ ಆದ್ಯತೆ (Preference) ನೀಡುವ ಸಮಯದಲ್ಲಿ ಸಂಬಂಧಿತ ಇಲಾಖೆಗಳು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮದನ್ವಯ ಗುರುತಿಸಿರುವ ಅನುಸೂಚಿಯನ್ನು ಪರಿಶೀಲಿಸತಕ್ಕದ್ದು (ಅನುಬಂಧ-ಬಿ). ಈಗಾಗಲೇ ಆಯೋಗವು ಪೂರ್ವಭಾವಿ ಪರೀಕ್ಷೆಗೆ ಹೊರಡಿಸಿರುವ ಅಧಿಸೂಚನೆಯಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಗುರುತಿಸಲಾಗಿರುವ ಹುದ್ದೆಗಳಿಗೆ ಅನುಗುಣವಾಗಿ ಪರಿಶೀಲಿಸಿಕೊಂಡು ಆದ್ಯತೆಯನ್ನು ನೀಡತಕ್ಕದ್ದು.

5.10 ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ಹುದ್ದೆಗಳ ಆದ್ಯತೆ ನೀಡುವಾಗ "ನೇಮಕಾತಿ ಪ್ರಾಧಿಕಾರವು ದೈಹಿಕ ದಾರ್ಢ್ಯತೆ/ ವೈದ್ಯಕೀಯ ಅರ್ಹತೆಯ ಕುರಿತು ನಿಯಮಾನುಸಾರ ಪರಿಶೀಲಿಸುತ್ತದೆ. ಆಯೋಗದ ಅಧಿಸೂಚನೆಯನುಸಾರ ದೈಹಿಕ ದಾರ್ಢ್ಯತೆ ಅಗತ್ಯವಿರುವ ಹುದ್ದೆಗಳಿಗೆ ಅರ್ಹರಿದ್ದಲ್ಲಿ ಮಾತ್ರ ಸದರಿ ಹುದ್ದೆಗಳ ಆದ್ಯತೆಯನ್ನು ನೀಡತಕ್ಕದ್ದು."

5.11 **ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ, ಭಾವಚಿತ್ರ/ಸಹಿ ಹಾಗೂ Pursuing ಎಂದು ವಿದ್ಯಾರ್ಹತೆಯ ಅಂಕಣದಲ್ಲಿ ಆಯ್ಕೆ ಮಾಡಿದಲ್ಲಿ ಸದರಿ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್/UPI ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ/ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

5.12 ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂಬುದಾಗಿ ಅರ್ಥೈಸಿಕೊಳ್ಳುವಂತಿಲ್ಲ. ನಂತರದಲ್ಲಿ ಅರ್ಜಿ ಮತ್ತು ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 6. ಅರ್ಜಿ ಸಲ್ಲಿಸುವ ಹಂತಗಳು-

**"KPSC udyoga" ತಂತ್ರಾಂಶದ ಮೂಲಕ ಆಯೋಗದಿಂದ ಅಧಿಸೂಚಿಸಲಾದ ಮೇಲ್ಕಂಡ ಹುದ್ದೆಗೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ಸೂಚನೆಗಳು:**

**Instructions for Candidates to Apply Online for above Notified Post through KPSC Udyoga Software:**

ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ಮಾತ್ರ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ಅರ್ಜಿ ಸಲ್ಲಿಸಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

6.1 ಅಭ್ಯರ್ಥಿಗಳು KPSC ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

6.2 ಅರ್ಜಿದಾರರು KPSC ವೆಬ್‌ಸೈಟ್ https://kpsconline.karnataka.gov.in ಗೆ ಭೇಟಿ ನೀಡಬೇಕು ಮತ್ತು ಈಗಾಗಲೇ ನೋಂದಾಯಿಸಿಕೊಂಡಿರುವ User ID & Passwordಗಳನ್ನು ಉಪಯೋಗಿಸಿ Applicant login ನಲ್ಲಿ login ಆಗುವ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಸಬಹುದು.

6.3 ನಿಮ್ಮ ರುಜುವಾತುಗಳೊಂದಿಗೆ ಲಾಗ್‌ಇನ್ ಮಾಡಿದ ನಂತರ, ನೀವು ಸಕ್ರಿಯ ಅಧಿಸೂಚನೆಗಳನ್ನು ನೋಡುತ್ತೀರಿ. ಅರ್ಜಿಸಲ್ಲಿಸಲು " Apply to Post " Tab ಅನ್ನು ಕ್ಲಿಕ್ ಮಾಡಿ.

6.4 "Apply Post" ಲಿಂಕ್ ಅನ್ನು ಕ್ಲಿಕ್ ಮಾಡುವುದರಿಂದ ನೀವು ಅಧಿಸೂಚನೆಯ ಪ್ರಕಾರ ಅರ್ಹತಾ ಮಾನದಂಡಗಳನ್ನು ಪೂರೈಸಿದ್ದಿರಾ ಎಂದು ತಂತ್ರಾಂಶವು ಪರಿಶೀಲಿಸುತ್ತದೆ. ನೀವು ಅನರ್ಹರಾಗಿದ್ದರೆ, ಸಿಸ್ಟಂ ಮುಕ್ತವಾದ ಸಂದೇಶವನ್ನು ಪ್ರದರ್ಶಿಸುತ್ತದೆ.

6.5 ಮುಖ್ಯ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಅವರ ಅರ್ಜಿಯನ್ನು ಮುಂದುವರಿಸಲು ತಂತ್ರಾಂಶವು ಅನುಮತಿಸುತ್ತದೆ. ಅಭ್ಯರ್ಥಿಗಳು Notification ಅನ್ನು ಪೂರ್ಣವಾಗಿ ಓದಿ ತಮ್ಮ ಅರ್ಹತೆ ಬಗ್ಗೆ ಮನದಟ್ಟು ಮಾಡಿಕೊಂಡ ನಂತರವೇ ಅರ್ಜಿ ಹಾಕುವುದು ಮತ್ತು ಶುಲ್ಕವನ್ನು ತುಂಬಬೇಕು.

6.6 ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು, ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ.

6.7 ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:

a) ನೆಟ್ ಬ್ಯಾಂಕಿಂಗ್
b) ಡೆಬಿಟ್ ಕಾರ್ಡ್
c) ಕ್ರೆಡಿಟ್ ಕಾರ್ಡ್
d) UPI

6.8 ಶುಲ್ಕವನ್ನು ಪಾವತಿಸಲು ಕೆಳಗಿನ ವಿಧಾನವನ್ನು ಅನುಸರಿಸಿ:

a. ಹಂತ 1: ನೀವು ಅರ್ಜಿ ಸಲ್ಲಿಸಲು ಬಯಸುವ ನಿರ್ದಿಷ್ಟ ಅಧಿಸೂಚನೆಗಾಗಿ " APPLY Post" ಲಿಂಕ್ ಅನ್ನು ಕ್ಲಿಕ್ ಮಾಡಿ
b. ಹಂತ 2: ಆಯ್ಕೆ ಮಾಡಿದ ಅಧಿಸೂಚನೆಗಾಗಿ ಅಪ್ಲಿಕೇಶನ್ ಅನ್ನು ಪರಿಶೀಲಿಸಿ.
c. ಹಂತ 3: "Pay Now" ಬಟನ್ ಅನ್ನು ಕ್ಲಿಕ್ ಮಾಡಿ, ಅದು ನಿಮ್ಮನ್ನು ಪಾವತಿ ಪರದೆಗೆ ಮರು ನಿರ್ದೇಶಿಸುತ್ತದೆ. ಅಲ್ಲಿ, ನೀವು UPI, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಮತ್ತು ನೆಟ್ ಬ್ಯಾಂಕಿಂಗ್ ಗಳ ಮೂಲಕ ಪಾವತಿಸಲು ಆಯ್ಕೆ ಮಾಡಬಹುದು.
d. ಹಂತ 4: ಯಶಸ್ವಿಯಾಗಿ ಪಾವತಿಯಾದಲ್ಲಿ, ಪಾವತಿಯ ಯಶಸ್ಸನ್ನು ದೃಢೀಕರಿಸುವ ಮೂಲಕ ನಿಮ್ಮನ್ನು KPSC Udyoga software ಗೆ ಮರು ನಿರ್ದೇಶಿಸಲಾಗುತ್ತದೆ.
e. ಹಂತ 5: ನೀವು " Applied Post " ಗ್ರಿಡ್‌ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಬಹುದು.
f. ಹಂತ 6: ಪಾವತಿ ವಹಿವಾಟು ವಿಫಲವಾದಲ್ಲಿ, Applied Post ವಿಭಾಗದಲ್ಲಿ "Re-Payment" ಲಿಂಕ್‌ಅನ್ನು ಕ್ಲಿಕ್ ಮಾಡಿ ಮತ್ತು ಹಂತ 3 ಅನ್ನು ಪುನರಾವರ್ತಿಸಿ.

6.9 ಪಾವತಿ ವಹಿವಾಟು ಮಾಡುವ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ Browser Close / Refresh or Back button Pressನ್ನು ಮಾಡಬಾರದು.

6.10 ಪಾವತಿ ಮಾಡುವ ಸಂದರ್ಭದಲ್ಲಿ Processing / Pending ಬಂದಲ್ಲಿ, ಅಭ್ಯರ್ಥಿಗಳು Payment Complete ಆಗುವವರೆಗೆ ಕಾಯಲು ಸೂಚಿಸಿದೆ. ಇದರ ಬಗ್ಗೆ ಆಯೋಗವನ್ನು ಸಂಪರ್ಕಿಸುವ /ಮೇಲ್ ಅಥವಾ ಮಾಹಿತಿ ಕೇಳುವ ಅವಕಾಶವಿರುವುದಿಲ್ಲ.

6.11 ಅಭ್ಯರ್ಥಿಗಳು ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ QR Code ಇರುವ ಈ ಕೆಳಕಂಡ ಅಂಶಗಳನ್ನು ಒಳಗೊಂಡ ಸ್ವೀಕೃತಿ ನೀಡಲಾಗುವುದು.

- Application submitted
- Payment done
- Application is accepted

ಮೇಲ್ಕಂಡ ಅಂಶಗಳನ್ನೊಳಗೊಂಡ ಸ್ವೀಕೃತಿಯನ್ನು ಪಡೆದ ನಂತರವೇ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ಅರ್ಥೈಸಿಕೊಳ್ಳುವುದು.

6.12 ಸ್ವೀಕೃತವಾದ ಅರ್ಜಿಯ ಪ್ರಿವ್ಯೂನಲ್ಲಿನ QR Code ಅನ್ನು scan ಮಾಡಿದಲ್ಲಿ ಅಭ್ಯರ್ಥಿಯ ಹೆಸರು, ಅರ್ಜಿ ಸಂಖ್ಯೆ, ಅಧಿಸೂಚನೆ ಸಂಖ್ಯೆ ಮತ್ತು ಅರ್ಜಿ ಸಲ್ಲಿಸಿದ ದಿನಾಂಕಗಳ ಮಾಹಿತಿ ಪಡೆಯಬಹುದು.

6.13 ಆಯೋಗದ ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ ಆಯೋಗವು ಮುಖ್ಯ ಪರೀಕ್ಷೆಯ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದಾಗ ನೀವು ಸೂಚನೆಗಳನ್ನು ಸ್ವೀಕರಿಸುತ್ತೀರಿ.

6.14 **ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.**

6.15 ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ/ಸಮಯದ ನಂತರ ಶುಲ್ಕವನ್ನು ಪಾವತಿಸಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್, ಇತ್ಯಾದಿಗಳನ್ನು ಸ್ವೀಕರಿಸಲಾಗುವುದಿಲ್ಲ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

6.16 **ವಿಶೇಷ ಸೂಚನೆ:-** ನೀವು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸಿದಂತಾಗುವುದಿಲ್ಲ. ನಿಮ್ಮ ರುಜುವಾತುಗಳೊಂದಿಗೆ ಲಾಗಿನ್ ಮಾಡಿದ ನಂತರ ಅರ್ಜಿಯನ್ನು ಸಲ್ಲಿಸಲು "Apply to Post" Tab ಅನ್ನು ಕ್ಲಿಕ್ ಮಾಡಿ ಮುಖ್ಯ ಪರೀಕ್ಷೆಯ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿರುತ್ತದೆ.

6.17 ಸದರಿ ಅರ್ಜಿಯಲ್ಲಿನ ಮಾಹಿತಿಗಳನ್ನು ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ ತಂತ್ರಾಂಶದಲ್ಲಿ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ನಂತರ ವಿವರಗಳನ್ನು ತಪ್ಪಾಗಿ ಸಲ್ಲಿಸಿದ್ದು ಸರಿಪಡಿಸಿಕೊಡುವಂತೆ ಆಯೋಗಕ್ಕೆ ಪತ್ರ ವ್ಯವಹಾರ ಅಥವಾ E-Mail ಮೂಲಕ ಕಳುಹಿಸುವ ಯಾವುದೇ ಕೋರಿಕೆ/ಮನವಿ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

## 7. ನೇಮಕಾತಿ ವಿಧಾನ:

7.1 ಪೂರ್ವಭಾವಿ ಪರೀಕ್ಷೆಯ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:15ರ ಅನುಪಾತದಲ್ಲಿ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಮತ್ತು ಕೋರಿರುವ ಮೀಸಲಾತಿಯನ್ವಯ ಅರ್ಹ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡಲಾಗುತ್ತದೆ. (**As per Government Notification No. DPAR 48 SeLoA 2019, dated 17-04-2021).**

7.2 ಅರ್ಹ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಜೇಷ್ಠತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ 1:3ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು.

7.3 **ವ್ಯಕ್ತಿತ್ವ ಪರೀಕ್ಷೆ:** ಕರ್ನಾಟಕ ಗೆಜೆಟೆಡ್ ಪ್ರೊಬೆಷನರ್ಸ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇಮಕಾತಿ) (ತಿದ್ದುಪಡಿ) ನಿಯಮಗಳನ್ವಯ ಗ್ರೂಪ್-'ಎ' ಮತ್ತು 'ಬಿ' ಸೇವೆಗಳ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:3ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಕರೆಯಲಾಗುವುದು. ಆಯೋಗವು, ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳ ಜ್ಯೇಷ್ಠತೆ (Merit) ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಲಭ್ಯವಿರುವ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗನುಗುಣವಾಗಿ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಆಹ್ವಾನಿಸಲಾಗುವುದು. ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 20 ಎಸ್‌ಎಸ್‌ಸಿ 2022, ದಿನಾಂಕ:12-04-2022ರನ್ವಯ ವ್ಯಕ್ತಿತ್ವ ಪರೀಕ್ಷೆಯು ಗರಿಷ್ಠ 25 ಅಂಕಗಳನ್ನು ಒಳಗೊಂಡಿರುತ್ತದೆ.

7.4 ಅಭ್ಯರ್ಥಿಗಳು ಮುಖ್ಯಪರೀಕ್ಷೆಯಲ್ಲಿ ಮತ್ತು ವ್ಯಕ್ತಿತ್ವ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳ ಜೇಷ್ಠತೆ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳು ಮತ್ತು ಅರ್ಜಿಯಲ್ಲಿ ನೀಡಿರುವ ಆದ್ಯತೆಯನ್ವಯ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಲಾಗುವುದು.

**8. ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ಮುಖ್ಯ ಪರೀಕ್ಷೆಯ ವಿವರಗಳು ಈ ಕೆಳಕಂಡಂತಿವೆ:-**

**ಲಿಖಿತ ಪರೀಕ್ಷೆ/ Written Examination:-**

| ಪತ್ರಿಕೆಗಳು/Papers | ವಿಷಯ/Subject | ಅಂಕಗಳು/ marks | ಅವಧಿ Duration (ಗಂಟೆಗಳು/hours) |
|---|---|---|---|
| ಅರ್ಹತಾದಾಯಕ ಪತ್ರಿಕೆಗಳು/ Qualifying Papers | ಕನ್ನಡ / Kannada | 150 | 2 |
| | ಇಂಗ್ಲೀಷ್ /English | 150 | 2 |

| ಕಡ್ಡಾಯ ಪತ್ರಿಕೆಗಳು / Compulsory Papers | ಪತ್ರಿಕೆ -1/ Paper-1 | ಪ್ರಬಂಧ /Essay | 250 | 3 |
|---|---|---|---|---|
| | ಪತ್ರಿಕೆ -2 / Paper -2 | ಸಾಮಾನ್ಯ ಅಧ್ಯಯನ /General Studies -1 | 250 | 3 |
| | ಪತ್ರಿಕೆ -3 / Paper -3 | ಸಾಮಾನ್ಯ ಅಧ್ಯಯನ/General Studies -2 | 250 | 3 |
| | ಪತ್ರಿಕೆ -4 / Paper -4 | ಸಾಮಾನ್ಯ ಅಧ್ಯಯನ /General Studies -3 | 250 | 3 |
| | ಪತ್ರಿಕೆ -5 / Paper -5 | ಸಾಮಾನ್ಯ ಅಧ್ಯಯನ/General Studies -4 | 250 | 3 |
| ಲಿಖಿತ ಪರೀಕ್ಷೆಯ ಒಟ್ಟು ಅಂಕಗಳು /Total marks for the written examination | | | 1250 | |
| ವ್ಯಕ್ತಿತ್ವ ಪರೀಕ್ಷೆಯ ಒಟ್ಟು ಅಂಕಗಳು/Total marks for the Personality Test | | | 25 | |
| ಒಟ್ಟು/Total | | | 1275 | |

9. ಮುಖ್ಯ ಪರೀಕ್ಷೆಯ ವಿವರವಾದ ಪಠ್ಯಕ್ರಮವು ಆಯೋಗದ ವೆಬ್ ಸೈಟ್ http://kpsc.kar.nic.in/Syllabusನಲ್ಲಿ ಲಭ್ಯವಿರುತ್ತದೆ.

## 10. ಟಿಪ್ಪಣಿ:-

10.1 ಕಡ್ಡಾಯ ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳಲ್ಲಿ ಪಡೆದ ಅಂಕಗಳು ಅರ್ಹತಾದಾಯಕ ಸ್ವರೂಪದ್ದಾಗಿರುತ್ತವೆ. ಅರ್ಹತೆ ಪಡೆಯಲು ಈ ಪ್ರತಿಯೊಂದು ಪತ್ರಿಕೆಯಲ್ಲಿ ಕನಿಷ್ಠ ಶೇಕಡ 35 (52.5) ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಈ ಎರಡು ಪತ್ರಿಕೆಗಳಲ್ಲಿ ನಿಗದಿತ (ಅರ್ಹತಾ) ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಇತರೆ ಪತ್ರಿಕೆಗಳಲ್ಲಿ ಎಷ್ಟೇ ಹೆಚ್ಚು ಅಂಕಗಳನ್ನು ಗಳಿಸಿದ್ದರೂ ವ್ಯಕ್ತಿತ್ವ ಪರೀಕ್ಷೆಗೆ ಮತ್ತು ಆಯ್ಕೆಗೆ ಅರ್ಹರಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳ ಇತರೆ ವಿಷಯಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ.

10.2 ಮುಖ್ಯ ಪರೀಕ್ಷೆಯ ಕಡ್ಡಾಯ ಕನ್ನಡ ಹಾಗೂ ಕಡ್ಡಾಯ ಆಂಗ್ಲಭಾಷೆ ಪತ್ರಿಕೆಗಳನ್ನು ಹೊರತುಪಡಿಸಿ ಉಳಿದ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತದೆ. ಕಡ್ಡಾಯ ಕನ್ನಡ ಹಾಗೂ ಕಡ್ಡಾಯ ಆಂಗ್ಲಭಾಷೆ ಪತ್ರಿಕೆಗಳು ಎಸ್.ಎಸ್.ಎಲ್.ಸಿಯ ಪ್ರಥಮ ಭಾಷೆಯ ಮಟ್ಟದ್ದಾಗಿರುತ್ತದೆ

10.3 ಸದರಿ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ ಪ್ರಕಟಣೆ ನಂತರ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಪ್ರಕಟಿಸಲಾಗುವುದು. ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಮುದ್ರಿಸಲಾಗಿರುತ್ತದೆ. ಅಭ್ಯರ್ಥಿಗಳು ಪತ್ರಿಕೆಯ ಉತ್ತರಗಳನ್ನು ಸಂಪೂರ್ಣವಾಗಿ ಕನ್ನಡ ಅಥವಾ ಆಂಗ್ಲಭಾಷಾ ಮಾಧ್ಯಮದಲ್ಲಿಯೇ ಉತ್ತರಿಸತಕ್ಕದ್ದು. (ಅರ್ಹತಾದಾಯಕ ಪತ್ರಿಕೆಗಳನ್ನು ಹೊರತುಪಡಿಸಿ). ಕನ್ನಡ ಭಾಷೆಯಲ್ಲಿರುವ ಯಾವುದೇ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಗೊಂದಲವಾದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯ ಪ್ರಶ್ನೆಗಳನ್ನು ಸಹ ನೋಡಿಕೊಂಡು, ಪ್ರಶ್ನೆಯನ್ನು ಅರ್ಥೈಸಿಕೊಳ್ಳುವುದು.

10.4 ಅರ್ಹತಾದಾಯಕ ಭಾಷಾ ವಿಷಯದ ಪತ್ರಿಕೆಗಳನ್ನು ಹೊರತುಪಡಿಸಿ ಅಭ್ಯರ್ಥಿಯು ಪ್ರತಿ ಪತ್ರಿಕೆಗಳಿಗೆ (ಕನ್ನಡ/ಆಂಗ್ಲ) ಮಾಧ್ಯಮದಲ್ಲಿ ಬರೆಯಲು ನಿಯಮಾನುಸಾರ ಅರ್ಜಿ ಸಲ್ಲಿಸುವ ಸಮಯದಲ್ಲಿ ಪ್ರತ್ಯೇಕವಾಗಿ ಆಯ್ಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ಆಯ್ಕೆ ಮಾಡಿಕೊಂಡಿರುವ ಭಾಷಾ ಮಾಧ್ಯಮದಲ್ಲಿಯೇ ಉತ್ತರಿಸತಕ್ಕದ್ದು. ಅರ್ಧ ಕನ್ನಡ ಹಾಗೂ ಅರ್ಧ ಆಂಗ್ಲ ಮಾಧ್ಯಮದಲ್ಲಿ ಉತ್ತರಿಸಿದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಗೊಳಿಸುವುದಿಲ್ಲ. ಆಯ್ಕೆ ಮಾಡಿಕೊಂಡ ಮಾಧ್ಯಮವನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿಲ್ಲ.

10.5 ಎಲ್ಲಾ ವಿವರಣಾತ್ಮಕ ಉತ್ತರ ಪತ್ರಿಕೆಗಳನ್ನು digital evaluation ಮಾಡಲಾಗುವುದು.

## 11 ಅಭ್ಯರ್ಥಿಗಳಿಗೆ ಸೂಚನೆಗಳು

11.1 **ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

11.2 ಪರೀಕ್ಷಾ ಕೇಂದ್ರಗಳು ಮತ್ತು ಪರೀಕ್ಷಾ ದಿನಾಂಕಗಳು ಆಯೋಗದ ವಿವೇಚನಾನುಸಾರವಾಗಿ ಬದಲಾವಣೆಗೆ ಒಳಪಟ್ಟಿರುತ್ತವೆ. ಆಯೋಗವು ಅಭ್ಯರ್ಥಿಗೆ ಬೇರೆ ಕೇಂದ್ರವನ್ನು ಸೂಚಿಸಬಹುದು ಅಥವಾ ಪರಿಸ್ಥಿತಿಗನುಗುಣವಾಗಿ ಹೊಸ ಕೇಂದ್ರವನ್ನು ಸೇರಿಸಬಹುದು. ಈ ಸಂಬಂಧದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ.

11.3 ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ ಹಾಗೂ ಪರೀಕ್ಷಾ ಕೇಂದ್ರದ ಬದಲಾವಣೆ ಕುರಿತಂತೆ ಆಯೋಗಕ್ಕೆ ಯಾವುದೇ ಮನವಿಗಳು ಸ್ವೀಕೃತವಾದಲ್ಲಿ ಅವುಗಳನ್ನು ಪುರಸ್ಕರಿಸುವುದಿಲ್ಲ.

11.4 ಭರ್ತಿ ಮಾಡಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಇಟ್ಟುಕೊಳ್ಳತಕ್ಕದ್ದು. ಉತ್ತರಿಸುವ ಭಾಷಾ ಮಾಧ್ಯಮದ/ಪರೀಕ್ಷಾ ಕೇಂದ್ರದ ಬದಲಾವಣೆಗಾಗಿ ಸಲ್ಲಿಸುವ ಕೋರಿಕೆಗಳನ್ನು ಸ್ವೀಕರಿಸುವುದಿಲ್ಲ.

11.5 ಮುಖ್ಯ ಪರೀಕ್ಷೆಗೆ ಪ್ರಶ್ನೆ ಸಹಿತ ಉತ್ತರ ಪತ್ರಿಕೆ (QCAB) ನೀಡಲಾಗುತ್ತದೆ. ಆದುದರಿಂದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮುಖಪುಟದಲ್ಲಿ ನೀಡಲಾದ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

11.6 ಉತ್ತರ ಪತ್ರಿಕೆಯಲ್ಲಿ ಪ್ರಶ್ನೆಗಳಿಗೆ ಮಾತ್ರ ಉತ್ತರಗಳನ್ನು ಬರೆಯಬೇಕು. ಅನಾವಶ್ಯಕ ಬರಹಗಳಿದ್ದಲ್ಲಿ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲಾಗುವುದು. ಉದಾ: ಓಂ, ಶ್ರೀ ಇತರೆ ಚಿಹ್ನೆಗಳು, ಮೊಬೈಲ್ ಸಂಖ್ಯೆ,ಇತ್ಯಾದಿ.

11.7 ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ನೀಲಿ ಬಣ್ಣದ ಶಾಯಿಯ ಪೆನ್ನನ್ನು ಮಾತ್ರ ಉಪಯೋಗಿಸತಕ್ಕದ್ದು, ಯಾವುದೇ ಕಾರಣಕ್ಕೂ ಬೇರೆ ಬಣ್ಣಗಳ ಶಾಯಿಯ ಪೆನ್ನುಗಳನ್ನು ಬಳಸಬಾರದು. ಹೈಲೈಟ್ನರ್‍ಗಳನ್ನು ಉಪಯೋಗಿಸಬಾರದು.

11.8 ಅಭ್ಯರ್ಥಿಯು ತನ್ನ ನೋಂದಣಿ ಸಂಖ್ಯೆ ಇರುವ ಸ್ಥಳದಲ್ಲಿಯೇ ಪರೀಕ್ಷೆಗೆ ಹಾಜರಾಗಬೇಕು ಮತ್ತು ನಾಮಿನಲ್ ರೋಲ್‌ನಲ್ಲಿ ತನ್ನ ನೋಂದಣಿ ಸಂಖ್ಯೆ ಮತ್ತು ಭಾವಚಿತ್ರ ಇರುವ ಅಂಕಣದಲ್ಲಿಯೇ ವಿವರಗಳನ್ನು ಭರ್ತಿ ಮಾಡಿ ಸಹಿ ಮಾಡತಕ್ಕದ್ದು. ಇಲ್ಲವಾದಲ್ಲಿ ಆಯೋಗವು ತೆಗೆದುಕೊಳ್ಳುವ ಶಿಸ್ತುಕ್ರಮಕ್ಕೆ ಬದ್ಧರಾಗಿರಬೇಕು.

11.9 ಮುಖ್ಯ ಪರೀಕ್ಷೆಗೆ ನೀಡುವ ಪ್ರವೇಶ ಪತ್ರವು ತಾತ್ಕಾಲಿಕ. ಏನಾದರೂ ತಪ್ಪು/ಅಕ್ರಮಗಳು ಕಂಡು ಬಂದಲ್ಲಿ ಅಭ್ಯರ್ಥಿತ್ವವನ್ನು ಯಾವುದೇ ಹಂತದಲ್ಲಿ ರದ್ದುಪಡಿಸುವ ಅಧಿಕಾರ ಆಯೋಗಕ್ಕಿರುತ್ತದೆ.

## 12. ಅಂಗವಿಕಲ ಅಭ್ಯರ್ಥಿ ಮತ್ತು ಲಿಪಿಕಾರರಿಗೆ ಸಂಬಂಧಿಸಿದಂತೆ ಸೂಚನೆಗಳು:-

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 272 ಸೆನೆನಿ 2013 ಬೆಂಗಳೂರು, ದಿನಾಂಕ: 11.02.2021ರಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಆಯ್ಕೆ ಪ್ರಾಧಿಕಾರ ನಡೆಸುವ ಲಿಖಿತ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಕೆಳಕಂಡ ಮಾರ್ಗಸೂಚಿಗಳನ್ನು ನೀಡಲಾಗಿದೆ.

12.1 ಅಂಧ/ ದೃಷ್ಟಿಮಾಂದ್ಯ ಚಲನವಲನ ವೈಕಲ್ಯತೆ ಮತ್ತು ಮೆದುಳಿನ ಪಾರ್ಶ್ವವಾಯು ಅಂಗವಿಕಲತೆಗಳನ್ನು ಮತ್ತು ಇತರೆ ವರ್ಗಗಳ ಎದ್ದುಕಾಣುವ ಅಂಗವಿಕಲತೆಗಳನ್ನು (Blindness, Locomotor disability, Cerebral palsy and other categories of bench mark disabilities) ಹೊಂದಿದ್ದು, ಲಿಪಿಕಾರರ ಸೌಲಭ್ಯವನ್ನು ಪಡೆಯದಿರುವ ಅಭ್ಯರ್ಥಿಗಳಿಗೆ ಮತ್ತು ಲಿಪಿಕಾರರ ಸೌಲಭ್ಯ ಪಡೆಯುವ ಅಭ್ಯರ್ಥಿಗಳಿಗೆ ಪ್ರತಿ ಗಂಟೆಗೆ 20 ನಿಮಿಷಗಳ ಹೆಚ್ಚುವರಿ ಸಮಯಾವಕಾಶವನ್ನು ನೀಡಲಾಗುತ್ತದೆ.

12.2 ಬರವಣಿಗೆ ಸಾಮರ್ಥ್ಯವನ್ನು ಕುಂಠಿತಗೊಳಿಸುವ ದೃಷ್ಠಿಮಾಂದ್ಯತೆ ಅಭ್ಯರ್ಥಿಗಳಿಗೆ ತಂತ್ರಜ್ಞಾನವನ್ನು ಬಳಸಿ ಪ್ರಶ್ನೆ ಪತ್ರಿಕೆಗಳನ್ನು ದೊಡ್ಡ ಪ್ರಿಂಟುಗಳಲ್ಲಿ (Large Font) ನೀಡಲು ಅವಕಾಶ ಕಲ್ಪಿಸಿದ್ದು, ಅದರಂತೆ ಅಂಧ ಮತ್ತು ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ ಸಾಮಾನ್ಯ ಪ್ರಶ್ನೆಪತ್ರಿಕೆಗಳ ಜೊತೆಗೆ ದೊಡ್ಡ ಪ್ರಿಂಟುಗಳಲ್ಲೂ

(Large Font)ಪ್ರಶ್ನೆ ಪತ್ರಿಕೆಗಳನ್ನು ನೀಡುತ್ತಿದ್ದು, ಅಂತಹ ಅಭ್ಯರ್ಥಿಗಳು ಕೋರಿದ್ದಲ್ಲಿ ಅದೇ (Large Font) ಪ್ರಶ್ನೆಪತ್ರಿಕೆಗಳನ್ನು ಒದಗಿಸಲಾಗುವುದು.

12.3 **ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ಅಭ್ಯರ್ಥಿಗಳು ತನ್ನದೇ ಆದ ಲಿಪಿಕಾರರನ್ನು ಅಥವಾ ಆಯೋಗದ ಮೂಲಕ ಒದಗಿಸಲಾಗುವ ಲಿಪಿಕಾರರನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.** ಆಯೋಗದ ಮೂಲಕ ಒದಗಿಸಲಾಗುವ ಲಿಪಿಕಾರರನ್ನು ಅಭ್ಯರ್ಥಿಯು ಆಯ್ಕೆ ಮಾಡಿಕೊಂಡಲ್ಲಿ ತನಗೆ ಒದಗಿಸಿರುವ ಲಿಪಿಕಾರನು ಅರ್ಹನೇ ಅಥವಾ ಇಲ್ಲವೇ ಎಂಬುದನ್ನು ಪರಿಶೀಲಿಸಲು ಅನುವಾಗುವಂತೆ ಪರೀಕ್ಷೆಗೆ ಎರಡು ದಿನ ಮೊದಲೇ ಲಿಪಿಕಾರರನ್ನು ಭೇಟಿ ಮಾಡಲು ಅಭ್ಯರ್ಥಿಗೆ ಅವಕಾಶವನ್ನು ಕಲ್ಪಿಸಲಾಗುವುದು.

12.4 ಲಿಪಿಕಾರನ ವಿದ್ಯಾರ್ಹತೆಯ ವಿವರಗಳು:-

| | |
|---|---|
| ಲಿಪಿಕಾರನ ಕನಿಷ್ಠ ವಿದ್ಯಾರ್ಹತೆ. | ಲಿಪಿಕಾರನು ಹೊಂದಿರುವ ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಗಿಂತ ಕಡಿಮೆ ಇರತಕ್ಕದ್ದಲ್ಲ. |
| ಆಯ್ಕೆ ಪ್ರಾಧಿಕಾರ/ಆಯೋಗವು ಲಿಪಿಕಾರರನ್ನು ಒದಗಿಸಿದಲ್ಲಿ ಲಿಪಿಕಾರನ ವಿದ್ಯಾರ್ಹತೆ. | ಲಿಪಿಕಾರನ ವಿದ್ಯಾರ್ಹತೆಯು ಪರೀಕ್ಷೆಗೆ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಗಿಂತ ಹೆಚ್ಚಿರಬಾರದು. |
| ತನ್ನದೇ ಆದ ಲಿಪಿಕಾರರನ್ನು ಕರೆತರಲು ಅಭ್ಯರ್ಥಿಗೆ ಅವಕಾಶ ಕಲ್ಪಿಸಿದಲ್ಲಿ ಲಿಪಿಕಾರನ ವಿದ್ಯಾರ್ಹತೆ. | ಲಿಪಿಕಾರನು ಹೊಂದಿರುವ ವಿದ್ಯಾರ್ಹತೆಯು ಸದರಿ ಅಭ್ಯರ್ಥಿಯು ಹೊಂದಿರುವ ವಿದ್ಯಾರ್ಹತೆಗಿಂತ ಒಂದು ಹಂತ ಕೆಳಗಿರಬೇಕು. |

12.5 ಲಿಪಿಕಾರರನ್ನು ಬದಲಾಯಿಸಿದ ತುರ್ತು ಸಂದರ್ಭಗಳಲ್ಲಿ ಅಭ್ಯರ್ಥಿಯು ಲಿಪಿಕಾರನ ಗುರುತಿಗೆ ಸಂಬಂಧಿಸಿದ ಪೂರಕ ದಾಖಲೆ ಮತ್ತು ವಿದ್ಯಾರ್ಹತೆಯ ವಿವರಗಳನ್ನು ಪರೀಕ್ಷಾ ಉಪಕೇಂದ್ರದ ಮುಖ್ಯಸ್ಥರಿಗೆ ನೀಡತಕ್ಕದ್ದು.

12.6 ಅಭ್ಯರ್ಥಿಯು ಸ್ವತಃ ಕರೆತರುವ ಲಿಪಿಕಾರನ ದುರ್ನಡತೆಗೆ ಅಭ್ಯರ್ಥಿಯೆ ಜವಾಬ್ದಾರನಾಗಿರುತ್ತಾನೆ.

12.7 ಲಿಪಿಕಾರ ಹಾಗೂ ಅಭ್ಯರ್ಥಿಯ ನಡುವೆ ನಡೆಯುವ ಸಂವಾದವು ಪರೀಕ್ಷಾ ಕೊಠಡಿಯಲ್ಲಿನ ಶಾಂತಿಗೆ ಭಂಗ ತರಬಾರದು ಅಥವಾ ಅದೇ ಕೊಠಡಿಯಲ್ಲಿರುವ ಇತರೆ ಅಭ್ಯರ್ಥಿಗಳಿಗೆ ತೊಂದರೆ ಉಂಟು ಮಾಡುವಂತೆ ಇರಬಾರದು.

12.8 ಅಭ್ಯರ್ಥಿಯು ಸ್ವಂತ ಲಿಪಿಕಾರರನ್ನು ಕೋರಿದ್ದಲ್ಲಿ ಮಾತ್ರ ಆಯೋಗದಿಂದ ಸದರಿ ಲಿಪಿಕಾರರಿಗೆ ಪ್ರತ್ಯೇಕ ಪ್ರವೇಶ ಪತ್ರವನ್ನು ಜಾರಿ ಮಾಡಲಾಗುವುದು.

12.9 ತಮ್ಮದೇ ಆದ ಲಿಪಿಕಾರರನ್ನು ಕರೆತರಲು ಆಯ್ಕೆ ಮಾಡಿಕೊಂಡಿರುವ ಅಂಗವಿಕಲ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರದೊಂದಿಗೆ ಲಿಪಿಕಾರರ ಪ್ರವೇಶ ಪತ್ರವನ್ನು ಸಹ ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು.

**13. ದುರ್ನಡತೆ:-**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಆಯೋಗದ ಅನುಮೋದನೆ ಮೇರೆಗೆ**

ಸಹಿ/-
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

ಅನುಬಂಧ-ಎ

Annexure-A

| ಕ್ರ.ಸಂ. | ಸೇವಾ ವೃಂದದ ಹೆಸರು ಮತ್ತು ಇಲಾಖೆಯ ಹೆಸರು |
|---|---|
| ಗ್ರೂಪ್ 'ಎ' | |
| 01 | ಸಹಾಯಕ ಆಯುಕ್ತರು (ಕಿರಿಯ ಶ್ರೇಣಿ), ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆರ್.ಪಿ.ಸಿ & ಹೈ.ಕ) |
| 02 | ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು , ವಾಣಿಜ್ಯ ತೆರಿಗೆ ಇಲಾಖೆ (ಆರ್.ಪಿ.ಸಿ & ಹೈ.ಕ) |
| 03 | ಸಹಾಯಕ ನಿರ್ದೇಶಕರು, ಖಜಾನೆ ಇಲಾಖೆ (ಆರ್.ಪಿ.ಸಿ & ಹೈ.ಕ) |
| 04 | ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಆರ್.ಪಿ.ಸಿ & ಹೈ.ಕ) |
| 05 | ಡಿ.ವೈ.ಎಸ್.ಪಿ. ಒಳಾಡಳಿತ ಇಲಾಖೆ (ಆರ್.ಪಿ.ಸಿ & ಹೈ.ಕ) |
| 06 | ಸಹಾಯಕ ನಿರ್ದೇಶಕರು ಗ್ರೇಡ್-1 , ಸಮಾಜ ಕಲ್ಯಾಣ ಇಲಾಖೆ (ಆರ್.ಪಿ.ಸಿ & ಹೈ.ಕ) |
| 07 | ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ಸಹಾಯಕ ನಿರ್ದೇಶಕರು/ಪ್ರಾಂಶುಪಾಲರು (ಪಿಇಟಿಸಿ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಆರ್.ಪಿ.ಸಿ & ಹೈ.ಕ) |
| ಗ್ರೂಪ್ 'ಬಿ' | |
| 01 | ತಹಶೀಲ್ದಾರ್ (ಗ್ರೇಡ್-2) ಕಂದಾಯ ಇಲಾಖೆ (ಆರ್.ಪಿ.ಸಿ & ಹೈ.ಕ) |
| 02 | ವಾಣಿಜ್ಯ ತೆರಿಗೆ ಅಧಿಕಾರಿ, ವಾಣಿಜ್ಯ ತೆರಿಗೆ ಇಲಾಖೆ (ಆರ್.ಪಿ.ಸಿ & ಹೈ.ಕ) |
| 03 | ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ (ಆರ್.ಪಿ.ಸಿ & ಹೈ.ಕ) |
| 04 | ಸಹಾಯಕ ಅಧೀಕ್ಷಕರು, ಒಳಾಡಳಿತ ಇಲಾಖೆ (ಕಾರಾಗೃಹ) (ಆರ್.ಪಿ.ಸಿ & ಹೈ.ಕ) |
| 05 | ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಇಲಾಖೆ (ಆರ್.ಪಿ.ಸಿ) |
| 06 | ಸಹಾಯಕ ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ (ಆರ್.ಪಿ.ಸಿ) |
| 07 | ಅಬಕಾರಿ ಉಪ ಅಧೀಕ್ಷಕರು, ಆರ್ಥಿಕ ಇಲಾಖೆ (ಅಬಕಾರಿ) (ಆರ್.ಪಿ.ಸಿ & ಹೈ.ಕ) |
| 08 | ಉದ್ಯೋಗಾಧಿಕಾರಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ (ಆರ್.ಪಿ.ಸಿ & ಹೈ.ಕ) |
| 09 | ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ (ಆರ್.ಪಿ.ಸಿ) |
| 10 | ಮುಖ್ಯಾಧಿಕಾರಿ (ಗ್ರೇಡ್-1), ನಗರಾಭಿವೃದ್ಧಿ ಇಲಾಖೆ (ಹೈ.ಕ) |
| 11 | ಸಹಾಯಕ ಖಜಾನಾಧಿಕಾರಿ, ಆರ್ಥಿಕ ಇಲಾಖೆ, (ಖಜಾನೆ) (ಆರ್.ಪಿ.ಸಿ & ಹೈ.ಕ) |
| 12 | ಸಹಾಯಕ ನಿರ್ದೇಶಕರು, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ (ಆರ್.ಪಿ.ಸಿ) |
| 13 | ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ (ಆರ್.ಪಿ.ಸಿ & ಹೈ.ಕ) |
| 14 | ಶಾಖಾಧಿಕಾರಿ, ಕರ್ನಾಟಕ ಸರ್ಕಾರದ ಸಚಿವಾಲಯ (ಆರ್.ಪಿ.ಸಿ & ಹೈ.ಕ) |
| 15 | ಸಹಾಯಕ ನಿರ್ದೇಶಕರು (ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ (ಆರ್.ಪಿ.ಸಿ & ಹೈ.ಕ) |

**ವಿಶೇಷ ಸೂಚನೆ:**

1. ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಾವಳಿಗಳು, 1997 ಹಾಗೂ ತಿದ್ದುಪಡಿ ನಿಯಮಗಳ ಉಪನಿಯಮ 4. (3)ರಲ್ಲಿ **"**The candidates who apply for the Competitive Examinations shall clearly indicate in their application forms the services or posts for which they wish to be considered for appointment in the order of preference. They shall not be considered for such of the service or posts which are not preferred by them." ಎಂದು ನಮೂದಾಗಿದ್ದು, ಅದರಂತೆ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಅಧಿಸೂಚಿಸಿರುವ ಹುದ್ದೆಗಳ ಆದ್ಯತಾನುಕ್ರಮವನ್ನು(Preference) ಭರ್ತಿ ಮಾಡತಕ್ಕದ್ದು. ಆದ್ಯತೆ ನೀಡದಿರುವ ಹುದ್ದೆಗಳ ಆಯ್ಕೆಗೆ ಅವರನ್ನು ಪರಿಗಣಿಸಲಾಗುವುದಿಲ್ಲ.
2. ಅಂಗವಿಕಲ ಅಭ್ಯರ್ಥಿಗಳು ಹುದ್ದೆಗಳಿಗೆ ಆದ್ಯತೆ (Preference) ನೀಡುವ ಸಮಯದಲ್ಲಿ ಸಂಬಂಧಿತ ಇಲಾಖೆಗಳು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮದನ್ವಯ ಗುರುತಿಸಿರುವ ಅನುಸೂಚಿಯನ್ನು ಪರಿಶೀಲಿಸತಕ್ಕದ್ದು (ಅನುಬಂಧ-ಬಿ). ಈಗಾಗಲೇ ಆಯೋಗವು ಪೂರ್ವಭಾವಿ ಪರೀಕ್ಷೆಗೆ ಹೊರಡಿಸಿರುವ ಅಧಿಸೂಚನೆಯಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಗುರುತಿಸಲಾಗಿರುವ ಹುದ್ದೆಗಳಿಗೆ ಅನುಗುಣವಾಗಿ ಪರಿಶೀಲಿಸಿಕೊಂಡು ಆದ್ಯತೆಯನ್ನು ನೀಡತಕ್ಕದ್ದು.
3. ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯ ಅರ್ಜಿಯಲ್ಲಿ ಹುದ್ದೆಗಳ ಆದ್ಯತೆ ನೀಡುವಾಗ "ನೇಮಕಾತಿ ಪ್ರಾಧಿಕಾರವು ದೈಹಿಕ ದಾರ್ಢ್ಯತೆ/ ವೈದ್ಯಕೀಯ ಅರ್ಹತೆಯ ಕುರಿತು ನಿಯಮಾನುಸಾರ ಪರಿಶೀಲಿಸುತ್ತದೆ. ಆಯೋಗದ ಅಧಿಸೂಚನೆಯನುಸಾರ ದೈಹಿಕ ದಾರ್ಢ್ಯತೆ ಅಗತ್ಯವಿರುವ ಹುದ್ದೆಗಳಿಗೆ ಅರ್ಹರಿದ್ದಲ್ಲಿ ಮಾತ್ರ ಸದರಿ ಹುದ್ದೆಗಳ ಆದ್ಯತೆಯನ್ನು ನೀಡತಕ್ಕದ್ದು."

**1. ಅಭ್ಯರ್ಥಿಯು ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡು ಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ; ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಥವಾ ಆಯೋಗವು ನಡೆಸುವ ಪರೀಕ್ಷೆಗಳು ಅಥವಾ ಭಾರತದಲ್ಲಿನ ಇತರೆ ಲೋಕಸೇವಾ ಆಯೋಗಗಳು ನಡೆಸುವ ಪರೀಕ್ಷೆಗಳಿಂದ ಡಿಬಾರ್ ಮಾಡಲಾಗುವುದು.**

**2. ಅಭ್ಯರ್ಥಿಗಳು ಪರೀಕ್ಷೆ ಬರೆಯುವ ಸಮಯದಲ್ಲಿ ಪರೀಕ್ಷೆಗೆ ಸಂಬಂಧಿಸಿದಂತೆ ಯಾವುದಾದರೂ ಗೊಂದಲ/ಸಮಸ್ಯೆ ಉಂಟಾದಲ್ಲಿ ಪರೀಕ್ಷೆ ನಡೆಯಲು ಯಾವುದೇ ರೀತಿಯ ಅಡಚಣೆ ಉಂಟು ಮಾಡದೇ, ಪರೀಕ್ಷೆ ಬರೆದು ಪರೀಕ್ಷೆ ಮುಕ್ತಾಯವಾದ ನಂತರದಲ್ಲಿ ಲಿಖಿತ ಮನವಿಯನ್ನು ಉಪಕೇಂದ್ರದ ಮುಖ್ಯಸ್ಥರಿಗೆ/ಆಯೋಗಕ್ಕೆ ನೀಡತಕ್ಕದ್ದು. ಪರೀಕ್ಷೆಯನ್ನು ನಡೆಸಲು ಅಡಚಣೆ ಉಂಟುಮಾಡುವ ಮತ್ತು ಗಲಾಟೆ/ಗಲಭೆ/ದೊಂಬಿ ಸೃಷ್ಟಿಸುವ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸುವುದೂ ಅಲ್ಲದೇ ಆಯೋಗವು ತೆಗೆದುಕೊಳ್ಳುವ ಯಾವುದೇ ಶಿಸ್ತು ಕ್ರಮಕ್ಕೆ ನೀವು ಹೊಣೆಗಾರರಾಗುತ್ತೀರಿ.**

* * * * *